# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 30 |
| ಸದಸ್ಯರ ಹೆಸರು | : | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.07.2024 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಮನಗರ ಜಿಲ್ಲಾ ಆಸ್ಪತ್ರೆಗೆ ಮಂಜೂರಾದ ತಜ್ಞ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳೆಷ್ಟು; ಹಾಲಿ ತುಂಬಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; (ಸಂಪೂರ್ಣ ವಿವರ ನೀಡುವುದು) | ರಾಮನಗರ ಜಿಲ್ಲಾ ಆಸ್ಪತ್ರೆಗೆ ಮಂಜೂರಾದ ತಜ್ಞ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು ಮತ್ತು ಇತರೆ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ. (see table below) |

| ವೃಂದ | ಮಂಜೂರು | ಕಾರ್ಯ ನಿರತ | ಖಾಲಿ |
|---|---|---|---|
| ತಜ್ಞ ವೈದ್ಯರು | 39 | 28 | 11 |
| ನರ್ಸ್‌ಗಳು | 50 | 17 | 33 |
| ಪ್ರಯೋಗಾಲಯ ತಂತ್ರಜ್ಞರು | 3 | 2 | 1 |
| ಇತರೆ | 110 | 43 | 67 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ. | ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ತಜ್ಞ ವೈದ್ಯರು, ನರ್ಸ್‌ಗಳು, ಪ್ರಯೋಗಾಲಯ ತಂತ್ರಜ್ಞರು ಮತ್ತು ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವೈದ್ಯಕೀಯ ಸೇವೆ ಬಲವರ್ಧನೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು) | ಬಂದಿದೆ.<br><br>ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿಮಾಡಲು ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗುತ್ತಿದೆ:-<br>1. ಸರ್ಕಾರದ ಪತ್ರ ಸಂಖ್ಯೆ: ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ: 13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾ.ಆ.ಕೇಂದ್ರ ಮತ್ತು ಸ.ಆ.ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br>2. ಸರ್ಕಾರದ ಆದೇಶ ಸಂಖ್ಯೆ: ಆಕುಕ 619 ಹೆಚ್‌ಎಸ್‌ಹೆಚ್ 2022, ದಿ: 17.01.2024ರಲ್ಲಿ ಆಕುಕ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರನ್ನು ಮತ್ತು 250 ಸಾ.ಕ.ವೈದ್ಯಾಧಿಕಾರಿಗಳನ್ನು ಕೆಲವು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಿದೆ.<br>3. ಇಲಾಖೆಯ ಮುಖಾಂತರ ಸೇವಾ ನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ.<br>ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ ತಜ್ಞ ವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಪ್ರಸ್ತುತ ಆರೋಗ್ಯ ಇಲಾಖೆಯಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ ಹೆಚ್‌ಎಫ್‌ಡಬ್ಲ್ಯೂ 709 ಹೆಚ್‌ಎಸ್‌ಎಂ 2017, ದಿನಾಂಕ: 17.05.2022ರಲ್ಲಿ ಅನುಮೋದಿಸಿದ್ದು, ಅದರನ್ವಯ ವಿಶೇಷ ನೇಮಕಾತಿ ಸಮಿತಿಯ ಅಧಿಸೂಚನೆ ಸಂಖ್ಯೆ: ಎಸ್‌ಆರ್.ಸಿ./ಆರ್.ಪಿ.ಸಿ./15/2022-23, 02.09.2022ರಲ್ಲಿ ಈ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡುವ ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.

| ಕ್ರ. ಸಂ. | ಪದನಾಮ | ಅಧಿಸೂಚಿಸಿದ ಹುದ್ದೆಗಳಸಂಖ್ಯೆ |
|---|---|---|
| 1. | ಫಾರ್ಮಸಿ ಅಧಿಕಾರಿ | 400 |
| 2. | ಕಿರಿಯ ವೈದ್ಯಕೀಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ | 150 |
| 3. | ವಿಕಿರಣ ಶಾಸ್ತ್ರ ಚಿತ್ರಣ ಅಧಿಕಾರಿ | 08 |
| | **ಒಟ್ಟು** | **558** |

ಸರ್ಕಾರದ ಪತ್ರ ಸಂಖ್ಯೆ: ಆಕುಕ 103 ಹೆಚ್.ಎಸ್.ಎಂ. 2019, ದಿನಾಂಕ: 03.02.2024ರನ್ವಯ ಖಾಲಿ ಇರುವ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ-200 ಹಾಗೂ ಫಾರ್ಮಸಿ ಅಧಿಕಾರಿ-400 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಇ. ರಾಮನಗರ ಜಿಲ್ಲಾ ಆಸ್ಪತ್ರೆಯಲ್ಲಿ ಕಳೆದ 3 ವರ್ಷಗಳಲ್ಲಿ ದಾಖಲಾದ ಒಳ ರೋಗಿ ಮತ್ತು ಹೊರ ರೋಗಿಗಳ ಸಂಖ್ಯೆ ಎಷ್ಟು; (ವಿವರಗಳನ್ನು ನೀಡುವುದು)

ರಾಮನಗರ ಜಿಲ್ಲಾ ಆಸ್ಪತ್ರೆ ಕಳೆದ 3 ವರ್ಷಗಳಲ್ಲಿ ದಾಖಲಾದ ಒಳ ರೋಗಿ ಮತ್ತು ಹೊರ ರೋಗಿಗಳ ವಿವರ.

| ವರ್ಷ | ಹೊರರೋಗಿಗಳು | ಒಳರೋಗಿಗಳು |
|---|---|---|
| 2021-2022 | 180031 | 5544 |
| 2022-2023 | 229391 | 11782 |
| 2023-2024 | 294318 | 14478 |

ಈ. ಅಪಘಾತ, ಹೃದ್ರೋಗ, ಕ್ಯಾನ್ಸರ್, ಮೂತ್ರ ಪಿಂಡ ಕಾಯಿಲೆಗಳ ತುರ್ತು ಚಿಕಿತ್ಸೆಗೆ ಜಿಲ್ಲಾ ಆಸ್ಪತ್ರೆಯಲ್ಲಿ ಅಗತ್ಯ ಮೂಲ ಸೌಕರ್ಯ ಮತ್ತು ತಜ್ಞ ವೈದ್ಯರುಗಳ ಕೊರತೆ ಇರುವುದರಿಂದ ಸಾರ್ವಜನಿಕರು ಬಹುತೇಕ ಖಾಸಗಿ ಆಸ್ಪತ್ರೆಗಳನ್ನು ಅವಲಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹ ಕಾಯಿಲೆಗಳ ತುರ್ತು ಚಿಕಿತ್ಸೆಯನ್ನು ಜಿಲ್ಲಾ ಆಸ್ಪತ್ರೆಯಲ್ಲಿಯೇ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)

ಜಿಲ್ಲಾ ಆಸ್ಪತ್ರೆ, ರಾಮನಗರ ಇಲ್ಲಿ ಅಪಘಾತ ಸಂದರ್ಭದಲ್ಲಿ ತುರ್ತು ಚಿಕಿತ್ಸೆ ಮತ್ತು ನೆಫ್ರೋಪ್ಲಸ್ ಸಂಸ್ಥೆಯವರ ಸಹಯೋಗದಿಂದ ಮೂತ್ರ ಪಿಂಡ ಕಾಯಿಲೆಗೆ ವೈದ್ಯಕೀಯ ಸೇವೆ ನೀಡಲಾಗಿದ್ದು, ಹೃದ್ರೋಗ ಮತ್ತು ಕ್ಯಾನ್ಸರ್ ಕಾಯಿಲೆಗಳಿಗೆ ಖಾಸಗಿ ಆಸ್ಪತ್ರೆಗೆ ಅವಲಂಭಿಸಿರುವುದು ಗಮನಕ್ಕೆ ಬಂದಿರುವುದಿಲ್ಲ. ಆಸ್ಪತ್ರೆಯಲ್ಲಿನ ತಜ್ಞ ವೈದ್ಯರುಗಳಿಂದ ಕಾಯಿಲೆಗಳಿಗೆ ತುರ್ತು ಚಿಕಿತ್ಸೆಯನ್ನು ನೀಡಲಾಗುತ್ತಿದೆ.

**HFW 35 HSD 2024**

**( ದಿನೇಶ್ ಗುಂಡೂರಾವ್ )**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.